ಮಾಡಿಕೊಳ್ಳಲು ಅರ್ಜಿಗಳನ್ನು ಪರಿಗಣಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ತದನಂತರದ ಅರ್ಜಿಗಳನ್ನು ಸ್ವೀಕರಿಸಲು ಅವಕಾಶವಿರುವುದಿಲ್ಲ.

ಇ) ಈ) ಪಡಾ ರೆಸ್ಪೋರ್ ಮಾಡುವಂತೆ ಕೋರಿ ಅರ್ಜಿಗಳು ಬರುತ್ತಿರುವುದರಿಂದ ಈ ಬಗ್ಗೆ ಪುನಃ ಕಾಲಾವಧಿಯನ್ನು ವಿಸ್ತರಿಸಲು ನಿಯಮಗಳಿಗೆ ತಿದ್ದುಪಡಿ ತರುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇದೆ.

ಇಲಾಖಾವತಿಯಿಂದ ಸಂಘ ಸಂಸ್ಥೆಗಳಿಗೆ ನೀಡುವ ಅನುದಾನ

29 (10) ಶ್ರೀ ಕೆ.ಎಂ. ಶಿವಲಿಂಗೇಗೌಡ (ಅರಸೀಕೆರೆ): ಮಾನ್ಯ ಅರಣ್ಯ ಮತ್ತು ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಅರಸೀಕೆರೆ ಕ್ಷೇತ್ರದ ಅರಣ್ಯ ಪ್ರದೇಶದಲ್ಲಿರುವ ದೇವಾಲಯಗಳಾದ ಶ್ರೀ ಶಂಕರೇಶ್ವರ ಮತ್ತು ಬೆಟ್ಟದ ಸಿದ್ದೇಶ್ವರ ದೇವಾಲಯಗಳಿಗೆ ರಸ್ತೆಗಳನ್ನು ನಿರ್ಮಿಸುವ ಕಾಮಗಾರಿಗಳಿಗೆ ತಡೆಯೊಡ್ಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳಾವುವು; ಅರಣ್ಯ ಪ್ರದೇಶದ ದೇವಾಲಯಗಳಿಗೆ ರಸ್ತೆಗಳ ಅವಶ್ಯಕತೆ ಇಲ್ಲವೇ; ಇದ್ದಲ್ಲಿ ಭಕ್ತಾದಿಗಳು ದೇವಸ್ಥಾನ ತಲುಪುವುದಕ್ಕೆ ಯಾವ ಕ್ರಮ ಕೈಗಳ್ಳಲಾಗಿದೆ?

ಶ್ರೀ ಸಿ.ಹೆಚ್. ವಿಜಯಶಂಕರ್ (ಅರಣ್ಯ ಮತ್ತು ಸಣ್ಣ ಕೈಗಾರಿಕಾ ಸಚಿವರು):

ಅ) ಅರಸೀಕೆರೆ ಕ್ಷೇತ್ರದ ಅರಣ್ಯ ಪ್ರದೇಶದಲ್ಲಿರುವ ದೇವಾಲಯಗಳಾದ ಶ್ರೀ ಶಂಕರೇಶ್ವರ ಮತ್ತು ಬೆಟ್ಟದ ಸಿದ್ಧೇಶ್ವರ ದೇವಾಲಯಗಳಿಗೆ ರಸ್ತೆಗಳನ್ನು ನಿರ್ಮಿಸುವ ಕಾಮಗಾರಿಕೆ 3.60. ಹೆ. ಅರಣ್ಯ ಭೂಮಿ ಬಿಡುಗಡೆ ಮಾಡಲು ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಹಾಸನ ರವರಿಂದ ಪ್ರಾಥಮಿಕ ಹಂತದ ಮನವಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದರೆ ಅರಣ್ಯ ಸಂರಕ್ಷಣಾ ಕಾಯ್ದೆ 1980 ರನ್ವಯ ಕೇಂದ್ರ ಸರ್ಕಾರದ ಪೂರ್ವಾನುಮತಿಯಿಲ್ಲದೇ ಯಾವುದೇ ಅರಣ್ಯ ಜಮೀನನ್ನು ಅರಣ್ಯೇತರ ಉದ್ದೇಶಗಳಿಗೆ ಬಿಡುಗಡೆ ಮಾಡಲು ಅವಕಾಶವಿರುವುದಿಲ್ಲ,

ಆ) ಸದರಿ ರಸ್ತೆ ಪ್ರಸ್ತಾವನೆಗೆ 3.60 ಹೆ. ಅರಣ್ಯ ಭೂಮಿಯನ್ನು ಬಿಡುಗಡೆ ಮಾಡಲು 1980ರ ಅರಣ್ಯ ಸಂರಕ್ಷಣಾ ಕಾಯ್ದೆ ಪ್ರಕಾರ ಪ್ರಸ್ತಾವನೆ ತಯಾರಿಸಿ ಕೇಂದ್ರ ಸರ್ಕಾರದ ಅನುಮೋದನೆ ಪಡೆಯುವುದು ಅವಶ್ಯಕತೆ

ಇರುತ್ತದೆ. ಈ ಕುರಿತು ನಿಯಮಾನುಸಾರ ಪ್ರಸ್ತಾವನೆಯನ್ನು ಪೂರ್ಣ ವಿವರಗಳೊಂದಿಗೆ ಸಲ್ಲಿಸಲು ಉಪ ಅರಣ್ಯ ಸಂರಕ್ಷಣಾಧಿಕಾರಿ, ಹಾಸನ ವಿಭಾಗ, ಹಾಸನ ರವರಿಗೆ ಈಗಾಗಲೇ ಅಗತ್ಯ ಸೂಚನೆಗಳನ್ನು ನೀಡಲಾಗಿದೆ. ಅರಣ್ಯ ಜಮೀನನ್ನು ಬಿಡುಗಡೆ ಮಾಡಲು ಅರಣ್ಯ ಜಮೀನಿಗೆ ಬದಲಿಯಾಗಿ ಪರಿಹಾರಾತ್ಮಕ ನೆಡುತೋಪು ಬೆಳೆಸಲು 3.60 ಹೆ. 'ಸಿ ಮತ್ತು ಡಿ' ವರ್ಗದ ಜಮೀನನ್ನು ಅರಣ್ಯ ಇಲಾಖೆಗೆ ವರ್ಗಾಯಿಸಿ ಇಂಡೀಕರಣಗೊಳಿಸಿ ಕೊಡುವಂತೆ ಉಪ ಅರಣ್ಯ ಸಂರಕ್ಷಣಾಧಿಕಾರಿ, ಹಾಸನ ರವರು ದಿನಾಂಕ 14-3-2011ರ ಪತ್ರದಲ್ಲಿ ಜಿಲ್ಲಾಧಿಕಾರಿ ಹಾಸನ ಜಿಲ್ಲೆ ಹಾಸನ ಇವರನ್ನು ಕೋರಿರುತ್ತಾರೆ. ನಂತರ ವಿವರವಾದ ಪ್ರಸ್ತಾವನೆಯನ್ನು ತಯಾರಿಸಿ ಕೇಂದ್ರ ಸರ್ಕಾರದ ಮಂಜೂರಾತಿಗಾಗಿ ಸಲ್ಲಿಸಲು ಕ್ರಮ ಕೈಗೊಳ್ಳಲಾಗುವುದು.

ಲಂಡನ್‌ನಲ್ಲಿ ಬಸವ ಪುತ್ಥಳಿ ಸ್ಥಾಪನೆ

05 (22) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ): ಮಾನ್ಯ ಕನ್ನಡ ಮತ್ತು ಸಂಸ್ಕೃತಿ, ಸಣ್ಣನೀರಾವರಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಲಂಡನ್‌ನಲ್ಲಿ ಬಸವ ಪುತ್ಥಳಿಯನ್ನು ನಿರ್ಮಿಸಲು ರಾಜ್ಯ ಸರ್ಕಾರವು 3 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದೆಯೇ;

ಆ) ಹಾಗಿದ್ದಲ್ಲಿ, ಲಂಡನ್‌ನ ಯಾವ ಸ್ಥಳದಲ್ಲಿ ಈ ಪುತ್ಥಳಿಯನ್ನು ನಿರ್ಮಿಸಲಾಗುವುದು ಹಾಗೂ ಇಲ್ಲಿಯವರೆಗೆ ಯಾವ ಯಾವ ರೀತಿಯ ಅನುಮತಿಯನ್ನು ಯಾರಿಂದ ಪಡೆದುಕೊಳ್ಳಲಾಗಿದೆ ಹಾಗೂ ಸ್ಥಳಕ್ಕೆ ಯಾರು ಯಾರು ಭೇಟಿ ನೀಡಿ ಪರಿಶೀಲನೆ ನಡೆಸಿರುತ್ತಾರೆ;

ಇ) ಈ ಮೂರ್ತಿ ನಿರ್ಮಾಣ ಹಾಗೂ ಪ್ರತಿಷ್ಠಾಪನೆಯ ಕೆಲಸದ ಗುತ್ತಿಗೆಯನ್ನು ಯಾರಿಗೆ ವಹಿಸಲಾಗಿದೆ; ಇದಕ್ಕಾಗಿ ಇಲ್ಲಿಯವರೆವಿಗೆ ವೆಚ್ಚ ಮಾಡಿರುವ ಹಣವೆಷ್ಟು ಹಾಗೂ ಇಲ್ಲಿಯವರೆವಿಗೆ ಈ ವಿಷಯದಲ್ಲಿ ಸಾಧಿಸಿರುವ ಪ್ರಗತಿ ಏನು;

ಈ) ಇನ್ನು ಎಷ್ಟು ಸಮಯದೊಳಗೆ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಲಾಗುವುದು?

ಶ್ರೀ ಗೋವಿಂದ ಎಂ. ಕಾರಜೋಳ (ಕನ್ನಡ ಮತ್ತು ಸಂಸ್ಕೃತಿ, ಸಣ್ಣನೀರಾವರಿ ಹಾಗೂ ಜವಳಿ ಸಚಿವರು):